ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕೊಳವೆ ಬಾವಿ ನಿಷೇಧ ಹೇರಿರುವ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು):-

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು):-

237 (1826+1813) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯಲು ಜಿಲ್ಲಾಧಿಕಾರಿಗಳು 2 ವರ್ಷಗಳಿಂದ ನಿಷೇಧ ಹೇರಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಆಧಾರದ ಮೇಲೆ ಈ ನಿಷೇಧವನ್ನು ಹೇರಲಾಗಿದೆ ; ನಿಷೇಧ ಹೇರಿದ್ದರಿಂದ ಜನ ಸಾಮಾನ್ಯರಿಗೆ ಹಾಗೂ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ; ಮತ್ತು ನಿಷೇಧ ಹೇರಿದ್ದು ಸರಿಯಾದ ಕ್ರಮವೇ ;

(ಇ) ಜಿಲ್ಲೆಯ ಎಲ್ಲಾ ರೈತರ ಜಮೀನುಗಳಿಗೆ ಯಾವ ರೀತಿ ನೀರಾವರಿ ಸೌಲಭ್ಯ ಒದಗಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೊಳವೆ ಬಾವಿ ನಿಷೇಧಿಸಲಾಗಿರುವ ಆದೇಶವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಹಿಂಪಡೆಯಲಾಗುವುದು ? (ಮಾಹಿತಿ ನೀಡುವುದು)